ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಖಾಸಗಿ ಶಾಲಾ ಕಾಲೇಜುಗಳಲ್ಲಿನ ಶಿಕ್ಷಕರಿಗೆ "ವಿಶೇಷ ಪ್ಯಾಕೇಜ್" ನೀಡುವ ಬಗ್ಗೆ

ಶ್ರೀ ಅರುಣ ಶಹಾಪುರ(ಶಿಕ್ಷಕರ ಕ್ಷೇತ್ರ) -

06 (04) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಒಟ್ಟು ಖಾಸಗಿ ಪ್ರಾಥಮಿಕ ಶಾಲೆ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಅಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕರ ಹಾಗೂ ಬೋಧಕೇತರರ ಸಂಖ್ಯೆ ಎಷ್ಟು;

(ಆ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿರುವ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಅವು ಯಾವುವು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಇ) ಅಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಬೋಧಕರ ಹೆಸರು, ಬೋಧಿಸುತ್ತಿರುವ ವಿಷಯ ಮತ್ತು ಅವರು ಕಾರ್ಯ ನಿರ್ವಹಿಸುತ್ತಿರುವ ಶಾಲಾ ಕಾಲೇಜುಗಳ ವಿವರವನ್ನು ಒದಗಿಸುವುದು;

(ಈ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಅನುದಾನ ರಹಿತವಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಹಾಗೂ ಅವರುಗಳ ಹೆಸರು, ಅವರು ಬೋಧಿಸುತ್ತಿರುವ ವಿಷಯ ಹಾಗೂ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳ ಹೆಸರು ಮತ್ತು ವಿಳಾಸವನ್ನು ಒದಗಿಸುವುದು; (ವಿಜಯಪುರ, ಬಾಗಲಕೋಟೆ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳ ಮಾಹಿತಿ ನೀಡುವುದು)

(ಉ) ಈ ಎಲ್ಲ ಶಿಕ್ಷಕರು ಕೋವಿಡ್-19 ರ ಸಮಸ್ಯೆಯ ಹಿನ್ನೆಲೆಯಲ್ಲಿ ಶಾಲೆಗಳು ನಡೆಯದೇ ಜೀವನ ನಿರ್ವಹಣೆ ಕಷ್ಟವಾಗಿದ್ದು, ಈ ಎಲ್ಲ ಸಿಬ್ಬಂದಿ ವರ್ಗಕ್ಕೆ ಸರ್ಕಾರದಿಂದ "ವಿಶೇಷ ಪ್ಯಾಕೇಜ್" ಘೋಷಣೆ ಮಾಡಿ ಆರ್ಥಿಕ ನೆರವಿಗೆ ಸರ್ಕಾರ ಮುಂದಾಗಲು ತೀರ್ಮಾನಿಸಿದೆಯೇ? (ವಿವರವನ್ನು ಒದಗಿಸುವುದು)